ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ತಿಳಿದಿದೆ.

ಆ) 8 ಹುದ್ದೆಗಳು ಲಿಪಿಕ ವರ್ಗಕ್ಕೆ ಸೇರಿರುವುದಿಂದ ಈ ಹುದ್ದೆಗಳು ಅತ್ಯಗತ್ಯ ಸೇವೆಯಲ್ಲಿ ಬರುವುದಿಲ್ಲ. ಇನ್ನು ಉಳಿದ 64 ಹುದ್ದೆಗಳಲ್ಲಿ 18 ಫಾರ್ಮಾಸಿಸ್ಟ್ 15 ಕಿರಿಯ ಪುರುಷ ಆರೋಗ್ಯ ಸಹಾಯಕರು ಒಟ್ಟು 18 ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇರ ನೇಮಕಾತಿ ನಿಯಮವನ್ನು ರೂಪಿಸಲು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಪ್ರಯೋಗ ಶಾಲೆ ತಂತ್ರಜ್ಞರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಯವರಿಗೆ ಅನುಮತಿ ನೀಡಲಾಗಿದೆ. ಉಳಿದ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

ಹುಣಸೂರು ಶ್ರೀ ಡಿ. ದೇವರಾಜ ಅರಸ್ ಪ್ರಥಮ ದರ್ಜೆ ಕಾಲೇಜಿಗೆ ಹಣ ಬಿಡುಗಡೆ

2583(3359) ಶ್ರೀ ವಿ. ಪಾಪಣ್ಣ (ಹುಣಸೂರು) :— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ಟೌನ್ ಶ್ರೀ ದೇವರಾಜ್ ಅರಸ್ ಸರ್ಕಾರಿ ಕಾಲೇಜಿಗೆ ಕಟ್ಟಡ ನಿರ್ಮಾಣಕ್ಕೆ 1991ರಲ್ಲಿ 62 ಲಕ್ಷ ರೂ.ಗಳಿಗೆ ಮಂಜೂರಾತಿ ದೊರಕಿದ್ದು, ಈವರೆಗೆ 35 ಲಕ್ಷ ಮಾತ್ರ ಬಿಡುಗಡೆಯಾಗಿದ್ದು, ಈ ಕಟ್ಟಡವನ್ನು ಪೂರ್ಣಗೊಳಿಸಲು ಕಳೆದ ಅಧಿವೇಶನದಲ್ಲಿ 30 ಲಕ್ಷ ಬಿಡುಗಡೆ ಮಾಡುತ್ತೇವೆಂದು ಭರವಸೆ ಕೊಟ್ಟಿದ್ದು ನಿಜವಲ್ಲವೇ?

ಆ) ಹಾಗಿದ್ದಲ್ಲಿ, ಈ ಹಣವನ್ನು ಇನ್ನೂ ಬಿಡುಗಡೆ ಮಾಡದಿರಲು ಕಾರಣವೇನು?

ಇ) ಯಾವಾಗ ಈ ಹಣವನ್ನು ಬಿಡುಗಡೆ ಮಾಡಲಾಗುವುದು;

ಈ) ಈ ಕಾಮಗಾರಿಯನ್ನು ಯಾವಾಗ ಮುಕ್ತಾಯ ಗೊಳಿಸಲಾಗುವುದು?

ಡಾ: ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :—

ಅ) ಹೌದು.

ಆ), ಇ) ಸರ್ಕಾರವು ಪ್ರಥಮ ದರ್ಜೆ ಕಾಲೇಜುಗಳು ಕಟ್ಟಡ ನಿರ್ಮಾಣವನ್ನು ಕೈಗೆತ್ತಿಕೊಳ್ಳಲು ಹುಡ್ಕೋ ಸಂಸ್ಥೆಯಿಂದ ರೂ.1871 ಲಕ್ಷ ನೆರವನ್ನು ಪಡೆಯಲು ಕ್ರಮ ಕೈಗೊಂಡಿದೆ. ಹುಡ್ಕೋ ಸಂಸ್ಥೆಯಿಂದ ಆರ್ಥಿಕ ನೆರವು ದೊರೆತ ತಕ್ಷಣ ಕಾಮಗಾರಿ ಕೆಲಸ ಕೈಗೆತ್ತಿಕೊಳ್ಳಲಾಗುವುದು.

೩೬೯-೨೨

ಈ) ಹುಡ್ಕೋ ಸಂಸ್ಥೆಯಿಂದ ಅನುದಾನ ಬಿಡುಗಡೆಯಾದ ಕೂಡಲೇ ಸದರಿ ಕಾಲೇಜಿನ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಹುಣಸೂರು ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಯಲ್ಲಿ ತ್ರೈಮಾಸಿಕ (ಕೆ.ಟಿ.ಪಿ) ಪರಿಶೀಲನೆ ಸಭೆ

2584 (3360) ಶ್ರೀ ವಿ. ಪಾಪಣ್ಣ (ಹುಣಸೂರು) :— ಮಾನ್ಯ ಯೋಜನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕು ಪಂಚಾಯಿತಿಯ ತ್ರೈಮಾಸಿಕ ಪರಿಶೀಲನಾ ಸಭೆ (ಕೆ.ಟಿ.ಪಿ)ಗೆ ಕೆಲವು ತಾಲ್ಲೂಕಿನ ಅಧಿಕಾರಿಗಳು ಗೈರುಹಾಜರಾಗಿ ಮಾಹಿತಿಯನ್ನು ನೀಡದೇ ಇರುವುದು ಸರ್ಕಾರಕ್ಕೆ ತಿಳಿದಿದೆಯೆ;

ಆ) ಹಾಗಿದ್ದಲ್ಲಿ, ಗೈರುಹಾಜರಾದವರ ಮೇಲೆ ಸರ್ಕಾರವು ಯಾವ ರೀತಿನ ಕ್ರಮವನ್ನು ಕೈಗೊಂಡಿದೆ.

ಶ್ರೀಮತಿ ಸುಮಾ ವಸಂತ್ (ಯೋಜನಾ ರಾಜ್ಯ ಸಚಿವರು) :—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮುಂಡರಗಿ ಜಿಲ್ಲಾ ಪಂಚಾಯತ್ ಉಪ ವಿಭಾಗದಲ್ಲಿ ಹಣ ದುರುಪಯೋಗ

2585(2920) ಶ್ರೀ ಪಾಟೀಲ್ ಸಿದ್ದಲಿಂಗನಗೌಡ ಸಿದ್ದನಗೌಡ (ಮುಂಡರಗಿ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗದಗ ಜಿಲ್ಲೆ ಮುಂಡರಗಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಉಪ ವಿಭಾಗದಲ್ಲಿ ಕಾಮಗಾರಿಗಳಲ್ಲಿ ಹಣದ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ದುರುಪಯೋಗವಾದ ಬಗ್ಗೆ ವಿವರ ನೀಡುವುದು;

ಇ) ದುರುಪಯೋಗಪಡಿಸಿಕೊಂಡ ಅಧಿಕಾರಿಗಳ ವಿವರ ನೀಡುವುದು ಮತ್ತು ಅವರ ಮೇರೆ ಕೈಗೊಳ್ಳಲಾದ ಕ್ರಮಗಳೇನು;